Akashvani : Bangalore

Regional Bulletin In Kannada

05.05.2025 / 18.40 hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ರಾಜ್ಯದಲ್ಲಿ ಪರಿಶಿಷ್ಟ ಜಾತಿಯ ಒಳಮೀಸಲಾತಿ ಸಮೀಕ್ಷೆಗೆ ಚಾಲನೆ; ಸಾರ್ವಜನಿಕರು ಸಹಕರಿಸುವಂತೆ

  ಜಿಲ್ಲಾಡಳಿತ ಮನವಿ

- ಸಾಮಾಜಿಕ ಮಾಧ್ಯಮಗಳಲ್ಲಿ ಬೆದರಿಕೆ ಸಂದೇಶ ಪೋಸ್ಟ್ ಮಾಡಿದರೆ ಕಠಿಣ ಕ್ರಮ- ಗೃಹ ಸಚಿವ ಪರಮೇಶ್ವರ್
- ಹೊಸಪೇಟೆಯಲ್ಲಿ ಟ್ರಕ್ ಟರ್ಮಿನಲ್ ಲೋಕಾರ್ಪಣೆಗೊಳಿಸಿದ ಸಚಿವ ರಾಮಲಿಂಗಾರೆಡ್ಡಿ
- ಕನ್ನಡದ ಮಹತ್ವದ ಕೃತಿಗಳು ವಿಶ್ವದ ಬೇರೆ ಭಾಷೆಗಳಿಗೆ ಭಾಷಾಂತರಗೊಳ್ಳಲು ಸಂಪೂರ್ಣ ಸಹಕಾರ -

  ಮುಖ್ಯಮಂತ್ರಿ ಸಿದ್ದರಾಮಯ್ಯ

- ಮಹದಾಯಿ ವಿಚಾರದಲ್ಲಿ ಕಾಂಗ್ರೆಸ್ ಕೊಡುಗೆ ಏನು - ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಪ್ರಶ್ನೆ

**<><*<><>*><>**

ಪರಿಶಿಷ್ಟ ಜಾತಿಗಳ ನಿಖರ ದತ್ತಾಂಶ ಸಂಗ್ರಹ ಕಾರ್ಯ ಇಂದಿನಿಂದ ಆರಂಭವಾಗಿದ್ದು, ೨ ತಿಂಗಳಲ್ಲಿ ಒಳಮೀಸಲಾತಿ ಜಾರಿಗೊಳಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಇಂದಿನಿಂದ ಮೂರು ಹಂತದಲ್ಲಿ ಸಮೀಕ್ಷೆ ನಡೆಯಲಿದ್ದು, ಸಾರ್ವಜನಿಕರು ಸಹಕರಿಸುವಂತೆ ತಿಳಿಸಿದ್ದಾರೆ. ಬಾಗಲಕೋಟೆ ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿಯ ಒಳಮೀಸಲಾತಿ ಸಮಗ್ರ ಸಮೀಕ್ಷೆಗೆ

ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಜಮಖಂಡಿ ತಾಲೂಕಿನ ಕೊಣ್ಣೂರು ಗ್ರಾಮದಲ್ಲಿ ಚಾಲನೆ ನೀಡಿದರು. ಚಿತ್ರದುರ್ಗದಲ್ಲಿ ಪರಿಶಿಷ್ಟ ಜಾತಿಗಳ ಸಮಗ್ರ ಸಮೀಕ್ಷೆ-೨೦೨೫ಕ್ಕೆ ಜಿಲ್ಲಾಧಿಕಾರಿ ಟಿ. ವೆಂಕಟೇಶ್, ಜಿಲ್ಲಾ ಪಂಚಾಯಿತಿ ಸಿಇಒ ಎಸ್.ಜೆ. ಸೋಮಶೇಖರ್, ಮಾಜಿ ಸಚಿವ ಹೆಚ್. ಆಂಜನೇಯ ಚಾಲನೆ ನೀಡಿದರು.

ಬೆಂಗಳೂರು ಗ್ರಾಮಾಂತರ ಜಿಲ್ಲೆಯಾದ್ಯಂತ ಪರಿಶಿಷ್ಟ ಜಾತಿ ಒಳ ಮೀಸಲಾತಿ ಸಮೀಕ್ಷೆ ಆರಂಭವಾಗಿದ್ದು, ಗಣತಿದಾರರು ಮೇ ೧೭ ರವರೆಗೆ ಮನೆ ಮನೆಗೆ ಹೋಗಿ ದತ್ತಾಂಶ ಸಂಗ್ರಹಿಸಲಿದ್ದು, ಸಮೀಕ್ಷೆಗೆ ಸಹಕರಿಸುವಂತೆ ಜಿಲ್ಲಾಧಿಕಾರಿ ಎ.ಬಿ ಬಸವರಾಜು ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ. ಹಾಸನ ಜಿಲ್ಲೆಯಲ್ಲಿಯೂ ಇಂದಿನಿಂದ ಸಮೀಕ್ಷೆ ಆರಂಭವಾಗಿದ್ದು ಪ್ರತಿಯೊಬ್ಬರೂ ಜಾತಿ ಜನಗಣತಿಗೆ ಸಹಕಾರ ನೀಡುವಂತೆ ಜಿಲ್ಲಾಧಿಕಾರಿ ಸಿ.ಸತ್ಯಭಾಮ ಮನವಿ ಮಾಡಿದ್ದಾರೆ.

<><*<><>*><>

ಪರಿಸರ ನಾಶ ಮಾಡಿ ಅಭಿವೃದ್ಧಿ ಚಟುವಟಿಕೆ ನಡೆಸುವ ಬದಲು ಪ್ರಾಕೃತಿಕ ಸೌಹಾರ್ದತೆ ಇಂದಿನ ತುರ್ತು ಅಗತ್ಯ ಎಂದು ಉಪ ರಾಷ್ಟ್ರಪತಿ ಜಗದೀಪ್ ಧನಕರ್ ಪ್ರತಿಪಾದಿಸಿದ್ದಾರೆ. ಶಿರಸಿಯ ಅರಣ್ಯ ಕಾಲೇಜಿನಲ್ಲಿಂದು ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿ ಮಾತನಾಡಿದ ಅವರು, ಅರಣ್ಯ ಶ್ವಾಸಕೋಶದಂತೆ. ಶ್ವಾಸಕೋಶ ಸರಿಯಾಗಿದ್ದರೆ ಮನುಷ್ಯ ಉಸಿರಾಡಬಹುದು ಎಂದು ತಿಳಿಸಿದ್ದಾರೆ. ಪಶ್ಚಿಮ ಘಟ್ಟದ ರಕ್ಷಣೆಯಲ್ಲಿ ಅರಣ್ಯ ವಿದ್ಯಾರ್ಥಿಗಳೇ ಅರಣ್ಯದ ಉಳಿವಿನ ರಾಯಭಾರಿಗಳು ಎಂದು ಅವರು ಶ್ಲಾಘಿಸಿದ್ದಾರೆ.

<><*<><>*><>

ವಿವಾದಾತ್ಮಕ ಹೇಳಿಕೆ ನೀಡಿರುವ ಖ್ಯಾತ ಗಾಯಕ ಸೋನು ನಿಗಮ್ ವಿರುದ್ಧ ಪೊಲೀಸರು ಸೂಕ್ತ ಕ್ರಮ ಕೈಗೊಳ್ಳಲಿದ್ದಾರೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿರುವ ಪಾಕಿಸ್ತಾನಿಯರನ್ನು ಗಡಿಪಾರು ಮಾಡಲಾಗುತ್ತಿದ್ದು, ೬ ರಿಂದ ೭ ಪಾಕಿಸ್ತಾನಿ ಪ್ರಜೆಗಳು ರಾಜ್ಯದಲ್ಲಿದ್ದು, ಪರಿಶೀಲನೆ ನಡೆಯುತ್ತಿದೆ ಎಂದು ಮಾಹಿತಿ ನೀಡಿದ್ದಾರೆ. ಇದೇ ವೇಳೆ ಸಾಮಾಜಿಕ ಮಾಧ್ಯಮಗಳಲ್ಲಿ ಬೆದರಿಕೆ ಸಂದೇಶಗಳನ್ನು ಪೋಸ್ಟ್ ಮಾಡುವವರ ವಿರುದ್ಧ ತಕ್ಷಣವೇ ಕ್ರಮ ಕೈಗೊಳ್ಳುವಂತೆ ಕಾನೂನು ಮತ್ತು ಸುವ್ಯವಸ್ಥೆ ಎಡಿಜಿಪಿ ಗೆ ಸೂಚಿಸಲಾಗಿದೆ ಎಂದು ತಿಳಿಸಿದ್ದಾರೆ.

<><*<><>*><>

ರಾಜ್ಯದಲ್ಲಿ ನಿರ್ಮಾಣವಾಗಿರುವ ಮತ್ತು ನಿರ್ಮಾಣ ಹಂತದಲ್ಲಿರುವ ಒಟ್ಟು ಒಂಬತ್ತು ಟ್ರಕ್ ಟರ್ಮಿನಲ್ ಗಳಲ್ಲಿ ಹೊಸಪೇಟೆಯ ಟರ್ಮಿನಲ್ ಅತ್ಯಂತ ಸುಸಜ್ಜಿತವಾಗಿ ನಿರ್ಮಾಣಗೊಂಡಿದೆ ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಹೊಸಪೇಟೆಯ ಅಮರಾವತಿ ಗ್ರಾಮದಲ್ಲಿ ಟ್ರಕ್ ಟರ್ಮಿನಲ್ ಲೋಕಾರ್ಪಣೆಗೊಳಿಸಿ ಮಾತನಾಡಿದ ಅವರು, ಈ ರಾಷ್ಟ್ರೀಯ ಹೆದ್ದಾರಿಯಲ್ಲಿ ದಿನವೊಂದಕ್ಕೆ ಸುಮಾರು ೫ ಸಾವಿರ ಲಾರಿಗಳು ಸಂಚರಿಸುತ್ತಿದ್ದು, ಲಾರಿ ಚಾಲಕರು ಮತ್ತು ಕ್ಲೀನರ್ ಗಳಿಗೆ ಹಾಗೂ ವಿವಿಧ ವಾಹನಗಳ ಚಾಲಕರಿಗೆ ಇದು ಅನುಕೂಲವಾಗಲಿದೆ ಎಂದು ತಿಳಿಸಿದ್ದಾರೆ. ೧೨೦ ಚಾಲಕರಿಗೆ ಮತ್ತು ಕ್ಲಿನರ್ ಗಳಿಗೆ ವಸತಿ ಸೌಲಭ್ಯ ಒದಗಿಸಲಾಗಿದ್ದು, ಚಿತ್ರದುರ್ಗದಿಂದ ವಿಜಯಪುರಕ್ಕೆ ತೆರಳುವ ವಾಹನಗಳಿಗೆ ಉಪಯುಕ್ತವಾಗಿದೆ ಎಂದು ಹೇಳಿದ್ದಾರೆ.

<><*<><>*><>

ಕನ್ನಡದ ಮಹತ್ವದ ಕೃತಿಗಳು ಇಂಗ್ಲಿಷ್ ಸೇರಿ ವಿಶ್ವದ ಬೇರೆ ಬೇರೆ ಭಾಷೆಗಳಿಗೆ ಭಾಷಾಂತರಗೊಳ್ಳಲು ಸಂಪೂರ್ಣ ಸಹಕಾರ ನೀಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಕಮಲಾ ಹಂಪನಾ ಸಾಹಿತ್ಯ ವೇದಿಕೆ ಮತ್ತು ಕರ್ನಾಟಕ ಚಿತ್ರಕಲಾ ಪರಿಷತ್ ಸಹಯೋಗದಲ್ಲಿ ಬೆಂಗಳೂರಿನಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ "ಹಂಪನಾ ಅವರ " ಚಾರು ವಸಂತ" ದೇಸೀಕಾವ್ಯದ ಪರ್ಷಿಯನ್ ಭಾಷಾ ಕೃತಿಯನ್ನು ಜನಾರ್ಪಣೆಗೊಳಿಸಿ ಮಾತನಾಡಿದ ಅವರು, "ಚಾರು ವಸಂತ" ವಿಶೇಷ ಕೃತಿಯಾಗಿದೆ ಎಂದು ಹೇಳಿದ್ದಾರೆ.

ಇಲ್ಲಿಯವರೆಗೆ ೧೬ ಭಾಷೆಗಳಿಗೆ ತರ್ಜುಮೆ ಆಗಿ, ಈಗ ೧೭ನೇ ಭಾಷೆಯಾಗಿ ಪರ್ಷಿಯನ್ ಗೆ ಅನುವಾದಗೊಂಡಿರುವುದು ಕನ್ನಡದ ಹೆಮ್ಮೆ ಎಂದು ತಿಳಿಸಿದ್ದಾರೆ. ಮಲ ಹೊರುವ ಪದ್ಧತಿ ಬಗ್ಗೆ ಇರುವ ಕೃತಿ ಇದಾಗಿದ್ದು, ಸಾಮಾಜಿಕ, ಆರ್ಥಿಕ ಶಕ್ತಿ ಎಲ್ಲರಿಗೂ ಸಿಕ್ಕಾಗ ಮಾತ್ರ ಚಲನೆ ಇಲ್ಲದ ಜಾತಿ ವ್ಯವಸ್ಥೆ ಅಳಿಯಲು ಸಾಧ್ಯ ಎಂದು ಅಭಿಪ್ರಾಯಪಟ್ಟಿದ್ದಾರೆ.

ಧ್ವನಿ: ಮುಖ್ಯಮಂತ್ರಿ ಸಿದ್ದರಾಮಯ್ಯ (    ಸೆಕೆಂಡ್ಸ್ )

<><*<><>*><>

ಬೆಂಗಳೂರಿನಲ್ಲಿ ಇದೇ ೩೦ ಮತ್ತು ೩೧ ರಂದು ನಡೆಯಲಿರುವ ಉತ್ಪಾದನಾ ಮಂಥನ್ ಕುರಿತ ಪೂರ್ವಭಾವಿ ಸಿದ್ಧತೆಗಳ ಬಗ್ಗೆ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಇಂದು ಉನ್ನತ ಅಧಿಕಾರಿಗಳ ಜೊತೆ ಸಭೆ ನಡೆಸಿದರು. ಕರ್ನಾಟಕವನ್ನು ಜಾಗತಿಕ ತಯಾರಿಕಾ ಕೇಂದ್ರವನ್ನಾಗಿ ಅಭಿವೃದ್ಧಿಪಡಿಸುವ ಮುನ್ನೋಟ ಕುರಿತ ಈ ಎರಡು ದಿನಗಳ ಚಿಂತನ - ಮಂಥನ ಸಮಾವೇಶದಲ್ಲಿ ಪ್ರಮುಖ ತಯಾರಿಕಾ ವಲಯಗಳು ಮತ್ತು ನವೋದ್ಯಮಗಳ ಉನ್ನತ ಅಧಿಕಾರಿಗಳು ಭಾಗವಹಿಸಲಿದ್ದಾರೆ ಎಂದು ಸಚಿವ ಎಂ.ಬಿ.ಪಾಟೀಲ್ ಮಾಹಿತಿ ನೀಡಿದ್ದಾರೆ. ವಾಹನ ತಯಾರಿಕೆ, ವೈಮಾಂತರಿಕ್ಷ ಹಾಗೂ ರಕ್ಷಣೆ, ಎಲೆಕ್ಟ್ರಾನಿಕ್ಸ್ ಸಿಸ್ಟಮ್ ಡಿಸೈನ್ ಮತ್ತು ಉತ್ಪಾದನೆ, ಜೈವಿಕ ತಂತ್ರಜ್ಞಾನ, ಕೃಷಿ ಹಾಗೂ ಆಹಾರ ಸಂಸ್ಕರಣೆ ಕ್ಷೇತ್ರಗಳಲ್ಲಿನ ರಾಜ್ಯದ ಸಾಧನೆಯನ್ನು ಇನ್ನಷ್ಟು ಎತ್ತರಕ್ಕೆ ಕೊಂಡೊಯ್ಯಲು ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಉದ್ಯಮ ದಿಗ್ಗಜರು ಈ ಸಮಾವೇಶದಲ್ಲಿ ರಾಜ್ಯ ಸರ್ಕಾರಕ್ಕೆ ಸೂಕ್ತ ಮಾರ್ಗದರ್ಶನ ನೀಡಲಿದ್ದಾರೆ.

<><*<><>*><>

ಗ್ರಾಮೀಣ, ಹಿಂದುಳಿದ, ರೈತರು ಮತ್ತು ಬಡ ಮಕ್ಕಳಿಗೆ ಅನುಕೂಲವಾಗಲೆಂದು ಪಿಯುಸಿ ಮತ್ತು ಎಸ್ಎಸ್ಎಲ್ಸಿ ಪರೀಕ್ಷೆಗಳಲ್ಲಿ ಅನುತ್ತೀರ್ಣರಾದ ವಿದ್ಯಾರ್ಥಿಗಳಿಗೆ ಪರೀಕ್ಷೆ ಬರೆಯಲು ಯಾವುದೇ ಶುಲ್ಕ ವಿಧಿಸಿಲ್ಲ ಎಂದು ಶಿಕ್ಷಣ ಸಚಿವ ಮಧುಬಂಗಾರಪ್ಪ ತಿಳಿಸಿದ್ದಾರೆ. ಶಿವಮೊಗ್ಗದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಬಾರಿ ೬೪ ಸಾವಿರದ ೬೦೦ ಎಸ್ಎಸ್ಎಲ್ಸಿ ವಿದ್ಯಾರ್ಥಿಗಳು ಎರಡನೇ ಪರೀಕ್ಷೆಗೆ ದಾಖಲಾಗಿದ್ದು, ಮೂರು ಪರೀಕ್ಷೆಗಳ ಸೂತ್ರ ಯಶಸ್ಸು ಕಂಡಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ಧ್ವನಿ: ಮಧುಬಂಗಾರಪ್ಪ, ಸಚಿವ ( ಸೆಕೆಂಡ್ಸ್ )

<><*<><>*><>

ಮಹದಾಯಿ ವಿಚಾರದಲ್ಲಿ ಕಾಂಗ್ರೆಸ್ ಕೊಡುಗೆ ಏನು ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಪ್ರಶ್ನಿಸಿದ್ದಾರೆ. ಹುಬ್ಬಳಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ೧೯೮೦ ರಿಂದ ಮಹದಾಯಿ ವಿಚಾರವಿದ್ದು, ಕೇಂದ್ರದಲ್ಲಿ ಕಾಂಗ್ರೆಸ್ ಸರ್ಕಾರವಿದ್ದರೂ ಯಾವುದೇ ನಿರ್ಣಯ ಏಕೆ ಕೈಗೊಂಡಿಲ್ಲ ಎಂದು ಕೇಳಿದ್ದಾರೆ. ಎನ್‌ಡಿಎ ಸರ್ಕಾರ ಮಹದಾಯಿಗೆ ಡಿಪಿಆರ್ ಹಾಗೂ ಪರಿಸರ ಅನುಮತಿ ಕೊಡಿಸಿದೆ. ಆದರೆ ಈಗ ಸಮಸ್ಯೆ ಬಂದಿರೋದು ವನ್ಯಜೀವಿ ಮಂಡಳಿಯದ್ದು ಎಂದು ಕೇಂದ್ರ ಸರ್ಕಾರವನ್ನು ಸಮರ್ಥಿಸಿಕೊಂಡಿದ್ದಾರೆ.

<><*<><>*><>

ಕರ್ನಾಟಕದ ಗ್ಯಾರಂಟಿ ಯೋಜನೆಗಳು ದೇಶಕ್ಕೆ ಮಾದರಿಯಾಗಿದ್ದು, ರಾಜ್ಯದ ಆರ್ಥಿಕ ಪರಿಸ್ಥಿತಿ ಸದೃಢವಾಗಿದೆ ಎಂದು ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ರಾಜ್ಯಾಧ್ಯಕ್ಷ ಎಚ್.ಎಂ.ರೇವಣ್ಣ ತಿಳಿಸಿದ್ದಾರೆ. ದಾವಣಗೆರೆಯಲ್ಲಿಂದು ಅನುಷ್ಠಾನ ಸಮಿತಿ ಕಚೇರಿ ಉದ್ಘಾಟಿಸಿ ಮಾತನಾಡಿದ ಅವರು, ಪಂಚ ಗ್ಯಾರಂಟಿ ಯೋಜನೆಗಳ ಜಾರಿಯಾದಾಗಿನಿಂದ ಇಲ್ಲಿಯವರೆಗೂ ರಾಜ್ಯದ ಜನರಿಗೆ ೮೨ ಸಾವಿರ ಕೋಟಿ ರೂಪಾಯಿ ನೀಡಲಾಗಿದೆ. ಇದರಿಂದ ರಾಜ್ಯದಲ್ಲಿ ಆರ್ಥಿಕ ಚಟುವಟಿಕೆಗಳು ಚುರುಕುಗೊಂಡಿವೆ ಎಂದು ಹೇಳಿದ್ದಾರೆ. ಯಾವುದೇ ಕಾರಣಕ್ಕೂ ಗ್ಯಾರಂಟಿ ಯೋಜನೆಗಳನ್ನು ಸ್ಥಗಿತಗೊಳಿಸುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

<><*<><>*><>

ಬೆಂಗಳೂರಿನ ಕಂಠೀರವ ಕ್ರೀಡಾಂಗಣದಲ್ಲಿ ಇದೇ ೨೪ ರಂದು ನೀರಜ್ ಚೋಪ್ರಾ ಅಂತಾರಾಷ್ಟ್ರೀಯ ಕ್ಲಾಸಿಕ್ ಜಾವೆಲಿನ್ ಸ್ಪರ್ಧೆ ನಡೆಯಲಿದೆ. ಆಯೋಜಕರು ಈ ಸ್ಪರ್ಧೆಯ ಟಿಕೆಟ್‌ಗಳನ್ನು ಮಾರಾಟ ಮಾಡಲು ನಿರ್ಧರಿಸಿದ್ದಾರೆ.ಇದು ಭಾರತದ ಮೊದಲ ಅಂತಾರಾಷ್ಟ್ರಿಯ ಜಾವೆಲಿನ್ ಸ್ಪರ್ಧೆಯಾಗಿದೆ. ಈ ಕ್ರೀಡಾಕೂಟದಲ್ಲಿ ನೀರಜ್ ಚೋಪ್ರಾ ಸೇರಿದಂತೆ ಥಾಮಸ್ ರೋಹ್ಲರ್ ಆಂಡರ್ಸನ್ ಪೀಟರ್ಸ್ ಸೇರಿದಂತೆ ಹಲವು ಒಲಿಂಪಿಕ್ ಪದಕ ವಿಜೇತರು ಪಾಲ್ಗೊಳ್ಳಲಿದ್ದಾರೆ.

<><*<><>*><>

ಇನ್ನು ಸಂಕ್ಷಿಪ್ತ ಸುದ್ದಿಗಳು...

೧. ಮಂಡ್ಯ ಜಿಲ್ಲೆಯ ಮಳವಳ್ಳಿ ತಾಲ್ಲೂಕಿನ ಬೆಳಕವಾಡಿ ಸಮೀಪದ ಕಾವೇರಿ ನದಿ ಅಣೆಕಟ್ಟೆನಿಂದ ರಾಮನಗರ ಜಿಲ್ಲೆಯ ನಾನಾ ಕಡೆಗೆ ಶಾಶ್ವತ ಕುಡಿಯುವ ನೀರು ಪೂರೈಕೆ ಯೋಜನೆಗೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇಂದು ಗುದ್ದಲಿ ಪೂಜೆ ನೆರವೇರಿಸಿದರು.

೨. ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಶಿವಮೊಗ್ಗ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಮಧು ಬಂಗಾರಪ್ಪ ಇಂದು ಸಾರ್ವಜನಿಕರಿಂದ ಅಹವಾಲು ಅರ್ಜಿಗಳನ್ನು ಸ್ವೀಕರಿಸಿದರು.

೩. ರಾಯಚೂರು ತಾಲೂಕಿನ ವಿವಿಧ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆಗಳನ್ನು ಪರಿಹರಿಸಲು ತಾಲೂಕು ಪಂಚಾಯತ್ ಕಾರ್ಯಾಲಯದಲ್ಲಿ ಸಹಾಯವಾಣಿ ಆರಂಭಿಸಲಾಗಿದೆ.

ಸಾರ್ವಜನಿಕರು ೯೪೮೩೨-೦೩೦೫೨ ಅಥವಾ ೮೩೧೭೪-೪೪೩೬೦ ಗೆ ಕರೆ ಮಾಡಿ ದೂರು ನೀಡಬಹುದಾಗಿದೆ.

೪. ಹುಬ್ಬಳ್ಳಿಯಲ್ಲಿ ಕೇಂದ್ರ ಸರ್ಕಾರದ ಸ್ಪೋರ್ಟ್ಸ್ ಕಾಂಪ್ಲೆಕ್ಸ್ ಯೋಜನೆ ಕಾಮಗಾರಿ ನಡೆಯುತ್ತಿದ್ದು, ಕೇಂದ್ರ ಸಚಿವ ಪ್ರಹ್ಲಾದ ಜೋಶಿ ಹಾಗೂ ಶಾಸಕ ಅರವಿಂದ ಬೆಲ್ಲದ್ ಭೇಟಿ ನೀಡಿ ಕಾಮಗಾರಿ ಪರಿಶೀಲನೆ ನಡೆಸಿದರು.

೫. ಅಂಗನವಾಡಿ ನೌಕರರ ವೇತನ ಹೆಚ್ಚಳ, ಗ್ರ್ಯಾಚ್ಯುಟಿ, ಅಂಗನವಾಡಿ ಕೇಂದ್ರಗಳನ್ನು ಅಂಗನವಾಡಿ ಮಾಂಟೆಸ್ಸರಿ ಎಂದು ಘೋಷಿಸುವುದು ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಮೇ ೨೦ ರಂದು ನಡೆಯಲಿರುವ ಕಾರ್ಮಿಕ ಮುಷ್ಕರಕ್ಕೆ ಅಂಗನವಾಡಿ ನೌಕರರು ಬೆಂಬಲಿಸಲಿದೆ ಎಂದು ಕರ್ನಾಟಕ ರಾಜ್ಯ ಅಂಗನವಾಡಿ ನೌಕರರ ಸಂಘದ ಕೋಲಾರ ಜಿಲ್ಲಾ ಅಧ್ಯಕ್ಷೆ ಆರ್ ಅಂಜಲಮ್ಮ ತಿಳಿಸಿದ್ದಾರೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ 7.35 ಕ್ಕೆ <>*><>